ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ/ಆಯವ್ಯಯ/ಅ.ಉ.ಗೌ/ಆ.ಬಿ/04/202324.

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:25.01.2024.

ಇವರಿಗೆ.
ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.

ಮಾನ್ಯರೇ,

ವಿಷಯ: 2023-24ನೇ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳ ಗೌರವಧನಕ್ಕಾಗಿ ಕೊರತೆಯಾಗಿರುವ ಮಾಹೆಗಳಿಗೆ ಆವಶ್ಯಕವಾಗಿರುವ ಅನುದಾನದ ಮಾಹಿತಿಯನ್ನು ಸಲ್ಲಿಸುವ ಕುರಿತು.

ಉಲ್ಲೇಖ: 1.ಸರ್ಕಾರದ ಆದೇಶ ಸಂಖ್ಯೆ:ಇಡಿ/171/ಡಿಸಿಇ2023, ದಿನಾಂಕ:28.08.2023.
2.ಪತ್ರ ಸಂಖ್ಯೆ: ಕಾಶಿಇ/ನೇವಿ-1/ಅಉಅ/90/2023-24, ದಿನಾಂಕ:24.08.2023, 13.09.2023 ಮತ್ತು ದಿನಾಂಕ:21.09.2023

******

ಪ್ರಸ್ತಾಪಿತ ವಿಷಯ ಹಾಗೂ ಉಲ್ಲೇಖಿತ ಪತ್ರಗಳ 1&2ಕ್ಕೆ ಸಂಬಂಧಿಸಿದಂತೆ ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯಡಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 2023-24ನೇ ಸಾಲಿನಲ್ಲಿ ಹೆಚ್ಚುವರಿ ಕಾರ್ಯಭಾರಕ್ಕೆ ನೇಮಕಗೊಂಡು ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರು ಗಳಿಗೆ ಕರ್ತವ್ಯಕ್ಕೆ ಹಾಜರಾಗಿ ಕರ್ತವ್ಯವನ್ನು ನಿರ್ವಹಿಸಿದ ಅವಧಿಗೆ ಮಾತ್ರ ಸಂಬಂಧಿಸಿದಂತೆ ಕೊರತೆಯಾಗಿರುವ ಮಾಹೆಗಳಿಗೆ ಗೌರವಧನವನ್ನು ಪಾವತಿಸುವ ಸಂಬಂಧ ಬಾಕಿಯಿದ್ದಲ್ಲಿ ಆವಶ್ಯಕವಾಗಿರುವ ಗೌರವಧನದ ಮಾಹಿತಿಯನ್ನು ಗೂಗಲ್ ಫಾರಂನಲ್ಲಿ ಅಪ್‌ಲೋಡ್ ಮಾಡಲು ಹಾಗೂ ಇ-ಮೇಲ್ ವಿಳಾಸ **dcegfbudget@gmail.com**ಕ್ಕೆ ಎಕ್ಸೆಲ್‌ಫಾರ್ಮೆಟ್‌ನಲ್ಲಿ ದಿನಾಂಕ:29.01.2024ರೊಳಗೆ ಕಳುಹಿಸಿಕೊಡಲು ಸೂಚಿಸಲಾಗಿದೆ ಮತ್ತು ನಿಗಧಿತ ದಿನಾಂಕದ ಅವಧಿಯೊಳಗೆ ಗೌರವಧನದ ಮಾಹಿತಿಯನ್ನು ಸಲ್ಲಿಸದೇ ಇರುವ ಕಾಲೇಜುಗಳಿಗೆ ಗೌರವಧನವನ್ನು ಬಿಡುಗಡೆ ಮಾಡುವುದಿಲ್ಲ ಹಾಗೂ ಅತಿಥಿ ಉಪನ್ಯಾಸಕರುಗಳಿಗೆ ಗೌರವಧನವನ್ನು ನಿಗದಿತ ದಿನಾಂಕದೊಳಗೆ ಪಾವತಿಸಲು ಸಾಧ್ಯವಾಗದಿದ್ದಲ್ಲಿ ಪ್ರಾಂಶುಪಾಲರುಗಳೇ ನೇರ ಹೊಣೆಗಾರರಾಗಿರುತ್ತಾರೆ. ಇನ್ನೂ ಮುಂದೆ ಡಿಸಂಬರ್-2023ರ ಮಾಹೆವರೆಗೆ ಕೊರತೆ ಗೌರವಧನಕ್ಕಾಗಿ ಪ್ರಸ್ತಾವನೆಯನ್ನು ಸಲ್ಲಿಸಿದ್ದಲ್ಲಿ ಕೇಂದ್ರಕಛೇರಿಯಿಂದ ಅನುದಾನವನ್ನು ಬಿಡುಗಡೆ ಮಾಡುವುದಿಲ್ಲ. ಆದುದರಿಂದ ಈ ಕೂಡಲೇ ಗೌರವಧನಕ್ಕಾಗಿ ಅನುದಾನದ ಮಾಹಿತಿಯನ್ನು ಗೂಗಲ್ ಫಾರಂನಲ್ಲಿ ಅಪ್‌ಲೋಡ್ ಮಾಡಲು ಸೂಚಿಸಲಾಗಿದೆ. ನಿಗಧಿತ ಅವಧಿಯ ನಂತರ ಬಂದ ಪ್ರಸ್ತಾವನೆಗಳನ್ನು ಸ್ವೀಕರಿಸುವುದಿಲ್ಲ.

ನಿರ್ದೇಶಕರು
ಕಾಲೇಜು ಶಿಕ್ಷಣ ಇಲಾಖೆ

ಪ್ರತಿಯನ್ನು,
1.ಮಾಹಿತಿ ಅಧಿಕಾರಿಗಳು, ಮಾಹಿತಿ ಮತ್ತು ತಂತ್ರಜ್ಞಾನ ವಿಭಾಗ, ಕೇಂದ್ರಕಛೇರಿ ವಿಭಾಗ, ಬೆಂಗಳೂರು ಸದರಿ ಸುತ್ತೋಲೆಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ಸೂಕ್ತಕ್ರಮಕ್ಕಾಗಿ.
2.ಕಛೇರಿ ಪ್ರತಿ.